**ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ. ಎಂ. ಎಫ್.ಸಿ., ನ್ಯಾಯಾಲಯ ಚನ್ನಪಟ್ಟಣ**
**ಚನ್ನಪಟ್ಟಣ.**

**ಸಿ.ಸಿ. ಸಂಖ್ಯೆ: 560/2022**

ಚಾಸಾ: 1 ಪ್ರಾಸಾ:1

| | | |
|---|---|---|
| ಹೆಸರು | : | ಪುಟ್ಟಮಾದೇಗೌಡ |
| ಗಂಡನ/ತಂದೆಯ ಹೆಸರು | : | ಮಲ್ಲೇಗೌಡ |
| ವಯಸ್ಸು | : | 65 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ | : | ಸಾವಂದಿಪುರ ಗ್ರಾಮ. |

**ದಿನಾಂಕ 08.05.2026 ರಂದು ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆ: ಮಾನ್ಯ ಎಪಿಪಿ ಯವರಿಂದ:**

ಆರೋಪಿತರು ಗೊತ್ತು. ಆರೋಪಿತರಿಗೂ ಮತ್ತು ನನಗೂ ಬಾಯಿಮಾತಿನ ಜಗಳ ಆಗಿರುತ್ತದೆ. ಆರೋಪಿತರು ನನಗೆ ಅವಾಚ್ಯ ಶಬ್ದದಿಂದ ನಿಂದಿಸಿಲ್ಲ, ನನ್ನ ಮೇಲೆ ಹಲ್ಲೆ ಮಾಡಿಲ್ಲ, ಪ್ರಾಣ ಬೆದರಿಕೆ ಹಾಕಿಲ್ಲ, ಈ ಬಗ್ಗೆ ನಾನು ಪೋಲಿಸರಿಗೆ ದೂರು ನೀಡಿರುತ್ತೇನೆ. ಸದರಿ ದೂರನ್ನು ನಿಪಿ-**1** ಎಂದು ಗುರುತಿಸಲಾಯಿತು, ಅದಕ್ಕೆ ನಾನು ಹೆಬ್ಬಟ್ಟಿನ ಗುರುತನ್ನು ಹಾಕಿರುತ್ತೇನೆ.

ಪೋಲಿಸರು ನನ್ನ ಸಮಕ್ಷಮ ಮಹಜರ್ ಮಾಡಿಲ್ಲ. ಮಹಜರ್ ಅನ್ನು ನಿಪಿ-**2** ಎಂದು ಗುರುತಿಸಲಾಯಿತು. ಅದಕ್ಕೆ ನಾನು ಹೆಬ್ಬಟ್ಟಿನ ಗುರುತನ್ನು ಹಾಕಿರುತ್ತೇನೆ. ಪೋಲಿಸರು ನನ್ನ ಸಮಕ್ಷಮ ಮುದ್ದೆ ಮಾಲುಗಳನ್ನು ಜಪ್ತು ಮಾಡಿಕೊಂಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಸಂಪೂರ್ಣ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಅನುಮತಿ ಕೋರಿದ್ದಾರೆ, ಅನುಮತಿಸಲಾಯಿತು).**

**ಪಾಟೀ ಸವಾಲು: ಎಪಿಪಿಯವರಿಂದ:**

ದಿನಾಂಕ30.07.2022 ರಂದು ಸಂಜೆ 6.30 ಗಂಟೆಯ ಸಮಯದಲ್ಲಿ ನಾನು ಮನೆಯನ್ನು ಸ್ವಚ್ಚ ಮಾಡಿಸುತ್ತಿದ್ದಾಗ 1 ನೇ ಆರೋಪಿ ನಮ್ಮ ಮನೆಯ ಹತ್ತಿರ ಬಂದು ಅವಾಚ್ಯ ಶಬ್ದದಿಂದ ಬೈದಿರುತ್ತಾರೆಂದರೆ ಸರಿಯಲ್ಲ. ಇದನ್ನು

ಕೇಳಲು ಹೋದ ನನಗೆ 2ನೇ ಆರೋಪಿಯೂ ಸಹ ನನಗೆ ಅವಾಚ್ಯ ಶಬ್ದದಿಂದ ಬೈದು, ಅಲ್ಲೇ ಬಿದ್ದಿದ್ದ ರಿಪೀಸ್ ಪಟ್ಟಿಯಿಂದ ಹಲ್ಲೆ ಮಾಡಿರುತ್ತಾರೆಂದರೆ ಸರಿಯಲ್ಲ. 1ನೇ ಆರೋಪಿಯು ಸಹ ತನ್ನ ಕೈಗಳಿಂದ ನನ್ನ ಮೇಲೆ ಹಲ್ಲೆ ಮಾಡಿದ್ದರಿಂದ ನನಗೆ ರಕ್ತ ಗಾಯವಾಗಿರುತ್ತದೆ ಎಂದರೆ ಸರಿಯಲ್ಲ. ಚಾಸಾ3 ರವರು ಜಗಳ ಬಿಡಿಸಲು ಹೋದಾಗ ಅವರಿಗೂ ಸಹ ಅವಾಚ್ಯ ಶಬ್ದದಿಂದ ಬೈದಿರುತ್ತಾರೆಂದರೆ ಸರಿಯಲ್ಲ. ಆರೋಪಿತರು ಕೊಲೆ ಬೆದರಿಕೆ ಹಾಕಿರುತ್ತಾರೆಂದರ ಸರಿಯಲ್ಲ. ಘಟನೆಗೆ ಸಂಬಂದಪಟ್ಟಂತೆ ನಾನು ಆಸ್ಪತ್ರೆಗೆ ಹೋಗಿ ಚಿಕಿತ್ಸೆಯನ್ನು ಪಡೆದಿರುತ್ತೇನೇಂದರೆ ಸರಿಯಲ್ಲ. ನಂತರ ಠಾಣೆಗೆ ಹಾಜರಾಗಿ ಈ ಬಗ್ಗೆ ನಾನು ನಿಪಿ-1 ರಂತೆ ದೂರು ನೀಡಿರುತ್ತೇನೆಂದರೆ ಸರಿಯಲ್ಲ.

ದಿಃ 03.08.2022 ರಂದು ಪೋಲಿಸರು ನಮ್ಮ ಗ್ರಾಮಕ್ಕೆ ಬಂದಿದ್ದು, ಅಲ್ಲಿ ನಾನು ಹಾಜರಿದ್ದು, ನಾನು ತೋರಿಸಿದ ಘಟನಾ ಸ್ಥಳದಲ್ಲಿ ಚಾಸಾ-4 ಮತ್ತು 5 ರವರ ಸಮಕ್ಷಮ ಬೆಳಗ್ಗೆ 9.00-9.45 ಗಂಟೆಯವರೆಗೆ ನಿಪಿ-2 ರಂತೆ ಮಹಜರ್ ಕ್ರಮ ಜರುಗಿಸಿರುತ್ತಾರೆಂದರೆ ಸರಿಯಲ್ಲ. ಆ ಸಮಯದಲ್ಲಿ 2 ವರೆ ಅಡಿ ಉದ್ದದ ಮರದ ರಿಪೀಸ್ ಪಟ್ಟಿಯನ್ನು ಅಮಾನತ್ತು ಪಡಿಸಿರುತ್ತಾರೆಂದರೆ ಸರಿಯಲ್ಲ.

ಆರೋಪಿತರು ನಮ್ಮ ಗ್ರಾಮದವರು ಆದ ಕಾರಣ ಅವರುಗಳ ಜೊತೆ ರಾಜಿ ಮಾಡಿಕೊಂಡಿರುವ ಕಾರಣ ಈ ದಿನ ಉದ್ದೇಶಪೂರ್ವಕವಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ</u>**

ಆರೋಪಿ ಪರ ವಕೀಲರು ಗೈರು ಹಾಜರಾಗಿದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಮರುವಿಚಾರಣೆಃ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)

ಓ.ಹೇ.ಕೇ.ಸ.ಒ

**(ವೆಂಕಟೇಶಪ್ಪ. ವಿ)**
**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.**